## ಕರ್ನಾಟಕ ಸರ್ಕಾರದ ನಡವಳಿ

**ವಿಷಯ:** ಗ್ರಾಮ ಪಂಚಾಯಿತಿ ಗ್ರಂಥಾಲಯ ಹೆಸರನ್ನು "ಗ್ರಾಮ ಪಂಚಾಯಿತಿ ಗ್ರಂಥಾಲಯ ಹಾಗೂ ಮಾಹಿತಿ ಕೇಂದ್ರ" ಎಂದು ಮರು ಪದನಾಮೀಕರಿಸಲು, ಕೆಲಸದ ವೇಳೆಯನ್ನು 6.00 ಗಂಟೆವರೆಗೆ ನಿಗಧಿಪಡಿಸಲು ಮತ್ತು ಗ್ರಂಥಾಲಯ ಮೇಲ್ವಿಚಾರಕರ ಗೌರವಧನವನ್ನು ರೂ. 7,000/- ಗಳಿಂದ ರೂ.12,000/- ಗಳಿಗೆ ಹೆಚ್ಚಿಸುವ ಬಗ್ಗೆ.

**ಓದಲಾಗಿದೆ:**
1. ಸರ್ಕಾರದ ಆದೇಶ ಸಂಖ್ಯೆ: ಇಡಿ64 ಎಲ್‌ಜಿಬಿ 2015, ದಿನಾಂಕ:26-02-2019.
2. ಸರ್ಕಾರದ ಆದೇಶ ಸಂಖ್ಯೆ: ಇಡಿ64 ಎಲ್‌ಜಿಬಿ 2015, ದಿನಾಂಕ:24-07-2019.
3. ಸರ್ಕಾರದ ಆದೇಶ ಸಂಖ್ಯೆ: ಇಡಿ 141 ಎಲ್‌ಜಿಬಿ 2016, ದಿನಾಂಕ:27-07-2016.
4. ಸರ್ಕಾರದ ಆದೇಶ ಸಂಖ್ಯೆ: ಇಡಿ 204 ಎಲ್‌ಜಿಬಿ 2016, ದಿನಾಂಕ:22-04-2017.

**ಪ್ರಸ್ತಾವನೆ:**

ಮೇಲೆ ಓದಲಾದ ಕ್ರಮ ಸಂಖ್ಯೆ(1) ಮತ್ತು (2)ರ ಸರ್ಕಾರದ ಆದೇಶದಲ್ಲಿ, ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಇಲಾಖೆಯ ಅಧೀನದಲ್ಲಿರುವ 5,633 ಗ್ರಾಮ ಪಂಚಾಯಿತಿ ಗ್ರಂಥಾಲಯಗಳ ನಿರ್ವಹಣೆಯನ್ನು, ಸಾರ್ವಜನಿಕ ಗ್ರಂಥಾಲಯ ಇಲಾಖೆಯಿಂದ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆಯ ಗ್ರಾಮ ಪಂಚಾಯತಿಗಳಿಗೆ ದಿನಾಂಕ:01-03-2019 ರಿಂದ ಜಾರಿಗೆ ಬರುವಂತೆ ವರ್ಗಾಯಿಸಲಾಗಿರುತ್ತದೆ. ಸದರಿ ಆದೇಶದಲ್ಲಿ, ಅನುದಾನವನ್ನು ಒಳಗೊಂಡಂತೆ ಹಾಗೂ ಗ್ರಾಮ ಪಂಚಾಯತಿಗಳು ವಸೂಲಿ ಮಾಡುವ ಗ್ರಂಥಾಲಯ ಉಪಕರವನ್ನು ಗ್ರಾಮ ಪಂಚಾಯಿತಿ ಗ್ರಂಥಾಲಯಗಳಿಗೆ ಬಳಸಬೇಕೆಂದು ತಿಳಿಸಿರುತ್ತದೆ.

ಗ್ರಾಮ ಪಂಚಾಯಿತಿ ಗ್ರಂಥಾಲಯಗಳು ಈ ಹಿಂದೆ ಬೆಳಿಗ್ಗೆ 9.00 ರಿಂದ 12.30 ರವರೆಗೆ ಮತ್ತು ಮಧ್ಯಾಹ್ನ 3.00 ರಿಂದ ಸಂಜೆ 6.00 ಗಂಟೆಯವರೆಗೆ ಪ್ರತಿ ಸರ್ಕಾರಿ ದಿನಗಳಂದು 6 ಗಂಟೆ 30 ನಿಮಿಷಗಳು ಕಾರ್ಯನಿರ್ವಹಿಸುತ್ತಿದ್ದವು. ಮೇಲೆ ಓದಲಾದ ಕ್ರಮ ಸಂಖ್ಯೆ (3) ರ ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಇಲಾಖೆಯ ಸರ್ಕಾರದ ಆದೇಶ ಸಂಖ್ಯೆ:ಇಡಿ 141 ಎಲ್‌ಜಿಬಿ 2016, ದಿನಾಂಕ:27-07-2016 ರಲ್ಲಿ ಗ್ರಾಮ ಪಂಚಾಯತಿ ಗ್ರಂಥಾಲಯಗಳು ಬೆಳಿಗ್ಗೆ 9.00 ರಿಂದ 11.00 ರವರೆಗೆ ಮತ್ತು ಸಂಜೆ 4.00 ರಿಂದ ಸಂಜೆ 6.00 ಗಂಟೆಯವರೆಗೆ ಒಟ್ಟು 4 ಗಂಟೆಗಳು ಕಾರ್ಯನಿರ್ವಹಿಸಲು ಆದೇಶಿಸಲಾಗಿದ್ದು, ಅದರಂತೆ ಪ್ರಸ್ತುತ 4 ಗಂಟೆಗಳ ಕಾಲ ಕಾರ್ಯನಿರ್ವಹಿಸುತ್ತಿವೆ.

ಮೇಲೆ ಓದಲಾದ ಕ್ರಮ ಸಂಖ್ಯೆ (4) ರ ಸರ್ಕಾರದ ಆದೇಶದಲ್ಲಿ ಗ್ರಾಮ ಪಂಚಾಯಿತಿ ಗ್ರಂಥಾಲಯ ಮೇಲ್ವಿಚಾರಕರ ಮಾನಸಿಕ ಗೌರವಧನವನ್ನು ದಿನಾಂಕ:01.05.2017 ರಿಂದ ಜಾರಿಗೆ ಬರುವಂತೆ ರೂ.5,500/- ರಿಂದ ರೂ.7,000/-ಗಳಿಗೆ ಹೆಚ್ಚಿಸಿ ಆದೇಶಿಸಲಾಗಿರುತ್ತದೆ.

ಪ್ರಸ್ತುತ ಗ್ರಾಮ ಪಂಚಾಯತಿ ಗ್ರಂಥಾಲಯಗಳು ಓದುಗರಿಗೆ ದಿನ ಪತ್ರಿಕೆಗಳು, ನಿಯತಕಾಲಿಕೆಗಳು, ಪುಸ್ತಕಗಳ ಸೌಲಭ್ಯವನ್ನು ಒದಗಿಸುತ್ತಿದ್ದು, ಗ್ರಾಮ ಪಂಚಾಯಿತಿಯಲ್ಲಿ ಮೂಲ ವಿಷಯಗಳಾದ ಹೆಣ್ಣು ಮಕ್ಕಳ ಶಿಕ್ಷಣ, ಮಹಿಳೆಯರ ಸಬಲೀಕರಣ, ಕೃಷಿ ಆಧಾರಿತ ಚಟುವಟಿಕೆಗಳನ್ನು ಯುವ ಜನತೆಯಲ್ಲಿ ಹೆಚ್ಚಿಸಲು, ಅನಕ್ಷರಸ್ಥರನ್ನು ಸಾಕ್ಷರತೆ ಕಲಿಯಲು ಅವಕಾಶ ಕಲ್ಪಿಸಲು, ಗ್ರಾಮೀಣ ಪ್ರದೇಶದಲ್ಲಿ ಕೌಶಲ್ಯಾಭಿವೃದ್ಧಿಪಡಿಸಿ ಗ್ರಾಮಾಂತರ ಕುಟುಂಬಗಳ ಆದಾಯ ಹೆಚ್ಚಿಸುವಂತಹ ಕಾರ್ಯಗಳಿಗೆ ಮಾನವ ಸಂಪನ್ಮೂಲದ ಕೊರತೆ ಇದ್ದು, ಗ್ರಂಥಾಲಯ ಮೇಲ್ವಿಚಾರಕರ ಸೇವೆಗಳನ್ನು ಈ ವಿಷಯಗಳಿಗೆ ಬಳಸಿಕೊಳ್ಳಲು, ಸರ್ಕಾರದ ಯೋಜನೆಗಳ ಮಾಹಿತಿಗಳು ಗ್ರಂಥಾಲಯದಲ್ಲಿ ಓದುಗರಿಗೆ ಲಭ್ಯವಿರುವಂತೆ ಸೂಕ್ತ ಕ್ರಮವಹಿಸುವಂತೆ ಮಾಡಬೇಕಾಗಿದೆ. ಗ್ರಂಥಾಲಯ ಮಾಹಿತಿ ಕೇಂದ್ರಗಳು ಜ್ಞಾನ ಮತ್ತು ಕಲಿಕಾ ಕೇಂದ್ರಗಳಾಗಿ ಕೆಲಸ ನಿರ್ವಹಿಸಲು ಗ್ರಂಥಾಲಯ ಮೇಲ್ವಿಚಾರಕರಿಗೆ ತರಬೇತಿ ನೀಡಬೇಕಾಗಿರುತ್ತದೆ. ಸದರಿ ಗ್ರಂಥಾಲಯಗಳು ಮಾಹಿತಿ ಕೇಂದ್ರಗಳಾಗಿ ಕಾರ್ಯನಿರ್ವಹಿಸಲು ಅನುಕೂಲವಾಗುವಂತೆ, ಗ್ರಾಮ ಪಂಚಾಯಿತಿ ಗ್ರಂಥಾಲಯ ಹೆಸರನ್ನು ಗ್ರಾಮ ಪಂಚಾಯಿತಿ ಗ್ರಂಥಾಲಯ ಹಾಗೂ ಮಾಹಿತಿ ಕೇಂದ್ರ ಎಂದು ಮರು ಪದನಾಮೀಕರಿಸುವ ಅವಶ್ಯಕತೆ ಇರುತ್ತದೆ.

ಮೇಲೆ ವಿವರಿಸಿರುವ ಹಿನ್ನೆಲೆಯಲ್ಲಿ, ರಾಜ್ಯ ಸರ್ಕಾರದಿಂದ ಸಾರ್ವಜನಿಕ ರಜೆ ಎಂದು ಘೋಷಿಸಲ್ಪಟ್ಟ ರಜಾ ದಿನಗಳು ಮತ್ತು ಪ್ರತಿ ತಿಂಗಳ ಎರಡನೇ ಮಂಗಳವಾರ ಹಾಗೂ ವಾರದ ರಜೆ (ಸೋಮವಾರ) ಹೊರತುಪಡಿಸಿ "ಗ್ರಾಮ ಪಂಚಾಯಿತಿ ಗ್ರಂಥಾಲಯ ಹಾಗೂ ಮಾಹಿತಿ ಕೇಂದ್ರ" ಕೆಲಸದ ವೇಳೆಯನ್ನು ದಿನಾಂಕ:01-06-2021 ರಿಂದ ಜಾರಿಗೆ ಬರುವಂತೆ ಪ್ರಸ್ತುತ ಇರುವ 4.00 ಗಂಟೆಯಿಂದ 6.00 ಗಂಟೆವರೆಗೆ ಅಂದರೆ ಮಂಗಳವಾರ, ಬುಧುವಾರ, ಗುರುವಾರ, ಶುಕ್ರವಾರ ಮತ್ತು ಭಾನುವಾರಗಳಂದು ಬೆಳಿಗ್ಗೆ 9.00 ಗಂಟೆಯಿಂದ ಮಧ್ಯಾಹ್ನ 1.00 ಗಂಟೆಯವರೆಗೆ ಹಾಗೂ ಮಧ್ಯಾಹ್ನ 3.00 ಗಂಟೆಯಿಂದ ಸಂಜೆ 5.00 ಗಂಟೆಯವರೆಗೆ ಹಾಗೂ ಶನಿವಾರದಂದು ಬೆಳಿಗ್ಗೆ 10.00 ಗಂಟೆಯಿಂದ ಮಧ್ಯಾಹ್ನ 1.00 ಮಧ್ಯಾಹ್ನ 2.00 ರಿಂದ ಸಂಜೆ 5.00 ಗಂಟೆವರೆಗೆ ನಿಗಧಿಪಡಿಸಲು ನಿರ್ಧರಿಸಿದೆ.

ಮುಂದುವರೆದು, ಹೆಚ್ಚಿದ ಗಂಟೆಗಳು ಮತ್ತು ವಿಭಜಿತ ಸಮಯವನ್ನು ಗಮನದಲ್ಲಿಟ್ಟುಕೊಂಡು ಗ್ರಾಮ ಪಂಚಾಯತಿ ಗ್ರಂಥಾಲಯ ಮೇಲ್ವಿಚಾರಕರ ಗೌರವಧನವನ್ನು ರೂ. 7,000/- ಗಳಿಂದ ರೂ.12,000/- ಗಳಿಗೆ ಹೆಚ್ಚಿಸಲು ಹಾಗೂ ಗ್ರಂಥಾಲಯ ಮೇಲ್ವಿಚಾರಕರಿಗೆ ಬಯೋಮೆಟ್ರಿಕ್ ಹಾಜರಾತಿ ವ್ಯವಸ್ಥೆ ಕಲ್ಪಿಸಿ, ಬಯೋಮೆಟ್ರಿಕ್ ಹಾಜರಾತಿ ಆಧಾರದ ಮೇಲೆ ಗೌರವಧನ ಪಾವತಿಸಲು ಮತ್ತು ಹೆಚ್ಚುವರಿ ಗೌರವಧನವನ್ನು ಪಾವತಿಸುವ ಬಗ್ಗೆ ಪ್ರತ್ಯೇಕವಾಗಿ ಆದೇಶ ಹೊರಡಿಸಲು ಸರ್ಕಾರವು ನಿರ್ಧರಿಸಿದೆ.

ಅದರಂತೆ ಈ ಆದೇಶ.

**ಸರ್ಕಾರದ ಆದೇಶ ಸಂಖ್ಯೆ: ಆರ್‌.ಡಿ.ಪಿ.ಆರ್. 62 ಜಿ.ಪಿ.ಎಸ್. 2020**
**ಬೆಂಗಳೂರು, ದಿನಾಂಕ: 26.05.2021.**

ಪ್ರಸ್ತಾವನೆಯಲ್ಲಿ ವಿವರಿಸಿರುವ ಅಂಶಗಳ ಹಿನ್ನೆಲೆಯಲ್ಲಿ, ಗ್ರಾಮ ಪಂಚಾಯಿತಿ ಗ್ರಂಥಾಲಯ ಹೆಸರನ್ನು "ಗ್ರಾಮ ಪಂಚಾಯಿತಿ ಗ್ರಂಥಾಲಯ ಹಾಗೂ ಮಾಹಿತಿ ಕೇಂದ್ರ" ಎಂದು ಮರು ಪದನಾಮೀಕರಿಸಿದೆ.

ರಾಜ್ಯ ಸರ್ಕಾರದಿಂದ ಸಾರ್ವಜನಿಕ ರಜೆ ಎಂದು ಘೋಷಿಸಲ್ಪಟ್ಟ ರಜಾ ದಿನಗಳು ಮತ್ತು ಪ್ರತಿ ತಿಂಗಳ ಎರಡನೇ ಮಂಗಳವಾರ ಹಾಗೂ ವಾರದ ರಜೆ (ಸೋಮವಾರ) ಹೊರತುಪಡಿಸಿ "ಗ್ರಾಮ ಪಂಚಾಯಿತಿ ಗ್ರಂಥಾಲಯ ಹಾಗೂ ಮಾಹಿತಿ ಕೇಂದ್ರ" ಕೆಲಸದ ವೇಳೆಯನ್ನು ದಿನಾಂಕ:01-06-2021 ರಿಂದ ಜಾರಿಗೆ ಬರುವಂತೆ ಪ್ರಸ್ತುತ ಇರುವ 4.00 ಗಂಟೆಯಿಂದ 6.00 ಗಂಟೆವರೆಗೆ ಅಂದರೆ ಮಂಗಳವಾರ, ಬುಧವಾರ, ಗುರುವಾರ, ಶುಕ್ರವಾರ ಮತ್ತು ಭಾನುವಾರಗಳಂದು ಬೆಳಿಗ್ಗೆ 9.00 ಗಂಟೆಯಿಂದ ಮಧ್ಯಾಹ್ನ 1.00 ಗಂಟೆಯವರೆಗೆ ಹಾಗೂ ಮಧ್ಯಾಹ್ನ 3.00 ಗಂಟೆಯಿಂದ ಸಂಜೆ 5.00 ಗಂಟೆಯವರೆಗೆ ಹಾಗೂ ಶನಿವಾರದಂದು ಬೆಳಿಗ್ಗೆ 10.00 ಗಂಟೆಯಿಂದ ಮಧ್ಯಾಹ್ನ 1.00 ಮಧ್ಯಾಹ್ನ 2.00 ರಿಂದ ಸಂಜೆ 5.00 ಗಂಟೆವರೆಗೆ ನಿಗದಿಪಡಿಸಿದೆ.

ಮುಂದುವರೆದು, ಹೆಚ್ಚಿದ ಗಂಟೆಗಳು ಮತ್ತು ವಿಭಜಿತ ಸಮಯವನ್ನು ಗಮನದಲ್ಲಿಟ್ಟುಕೊಂಡು ಗ್ರಾಮ ಪಂಚಾಯತಿ ಗ್ರಂಥಾಲಯ ಮೇಲ್ವಿಚಾರಕರ ಗೌರವಧನವನ್ನು ರೂ. 7,000/- ಗಳಿಂದ ರೂ.12,000/- ಗಳಿಗೆ ಹೆಚ್ಚಿಸಿ ಆದೇಶಿಸಿದೆ.

ಗ್ರಂಥಾಲಯ ಮೇಲ್ವಿಚಾರಕರಿಗೆ ಬಯೋಮೆಟ್ರಿಕ್ ಹಾಜರಾತಿ ವ್ಯವಸ್ಥೆ ಕಲ್ಪಿಸಿ, ಬಯೋಮೆಟ್ರಿಕ್ ಹಾಜರಾತಿ ಆಧಾರದ ಮೇಲೆ ಗೌರವಧನ ಪಾವತಿಸಲು ಸಹ ತಿಳಿಸಿದೆ. ಹೆಚ್ಚುವರಿ ಗೌರವಧನವನ್ನು ಪಾವತಿಸುವ ಬಗ್ಗೆ ಪ್ರತ್ಯೇಕವಾಗಿ ಆದೇಶ ಹೊರಡಿಸಲಾಗುವುದು.

ಈ ಆದೇಶವನ್ನು ಆರ್ಥಿಕ ಇಲಾಖೆಯ ಟಿಪ್ಪಣಿ ಸಂಖ್ಯೆ: ಎಫ್ ಡಿ 95 ಇಎಕ್ಸ್ ಪಿ -6/2020, ದಿನಾಂಕ:12.04.2021ರನ್ವಯ ಹೊರಡಿಸಲಾಗಿದೆ.

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ
ಮತ್ತು ಅವರ ಹೆಸರಿನಲ್ಲಿ

(ಉಮಾ ಮಹಾದೇವನ್)
ಸರ್ಕಾರದ ಪ್ರಧಾನ ಕಾರ್ಯದರ್ಶಿ (ಪಂ.ರಾಜ್)
ಗ್ರಾಮೀಣಾಭಿವೃದ್ಧಿ ಮತ್ತು ಪಂ.ರಾಜ್ ಇಲಾಖೆ

**ಇವರಿಗೆ:**

1. ಮಹಾಲೇಖಪಾಲರು, ಕರ್ನಾಟಕ, ಬೆಂಗಳೂರು.
2. ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿಗಳು, ಆರ್ಥಿಕ ಇಲಾಖೆ.
3. ಆಯುಕ್ತರು, ಕರ್ನಾಟಕ ಪಂಚಾಯತ್ ರಾಜ್ ಆಯುಕ್ತಾಲಯ, ಬೆಂಗಳೂರು ಗ್ರಾಮಾಂತರ ಜಿಲ್ಲಾ ಪಂಚಾಯತ್ ಹಳೆ ಕಟ್ಟಡ ಕಛೇರಿ, ಕೆ.ಜಿ.ರಸ್ತೆ, ಬೆಂಗಳೂರು.
4. ನಿರ್ದೇಶಕರು, ಅಬ್ದುಲ್ ನಜೀರ್ ಸಾಬ್ ರಾಜ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಂಸ್ಥೆ, ಲಲಿತ ಮಹಲ್ ರಸ್ತೆ, ಮೈಸೂರು.
5. ಜಂಟಿ ನಿರ್ದೇಶಕರು, ರಾಜ್ಯ ಹುಜೂರು ಖಜಾನೆ, ಬೆಂಗಳೂರು.
6. ನಿರ್ದೇಶಕರು, ಎನ್.ಎಂ.ಸಿ., ಖಜಾನೆ ಇಲಾಖೆ, ಖನಿಜ ಭವನ, ಬೆಂಗಳೂರು.
7. ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳು, ರಾಜ್ಯದ ಎಲ್ಲಾ ಜಿಲ್ಲಾ ಪಂಚಾಯಿತಿಗಳು.
8. ಕಾರ್ಯನಿರ್ವಾಹಕ ಅಧಿಕಾರಿಗಳು, ರಾಜ್ಯದ ಎಲ್ಲಾ ತಾಲ್ಲೂಕು ಪಂಚಾಯಿತಿಗಳು (ಆಯಾ ತಾಲ್ಲೂಕು ವ್ಯಾಪ್ತಿಯ ಗ್ರಾಮ ಪಂಚಾಯಿತಿಗಳಿಗೆ ಈ ಆದೇಶದ ಪ್ರತಿಯನ್ನು ತಲುಪಿಸುವ ವ್ಯವಸ್ಥೆ ಮಾಡುವಂತೆ ಸೂಚಿಸಲಾಗಿದೆ.
9. ಪಂಚಾಯತಿ ಅಭಿವೃದ್ಧಿ ಅಧಿಕಾರಿಗಳು, ರಾಜ್ಯದ ಎಲ್ಲಾ ಗ್ರಾಮ ಪಂಚಾಯತಿಗಳು (ಆಯಾ ಗ್ರಾಮ ಪಂಚಾಯಿತಿಗಳ "ಗ್ರಾಮ ಪಂಚಾಯಿತಿ ಗ್ರಂಥಾಲಯ ಹಾಗೂ ಮಾಹಿತಿ ಕೇಂದ್ರ" ಗಳಿಗೆ ಈ ಆದೇಶದ ಪ್ರತಿಯನ್ನು ತಲುಪಿಸುವ ವ್ಯವಸ್ಥೆ ಮಾಡುವಂತೆ ಸೂಚಿಸಲಾಗಿದೆ.
10. ವ್ಯವಸ್ಥಾಪಕರು, ಭಾರತೀಯ ಸ್ಟೇಟ್‌ಬ್ಯಾಂಕ್, ವಿಧಾನಸೌಧ ಶಾಖೆ, ಬೆಂಗಳೂರು-01-ಇವರಿಗೆ ಅಗತ್ಯ ಕ್ರಮಕ್ಕಾಗಿ.
11. ನಿರ್ದೇಶಕರು, ಸಾರ್ವಜನಿಕ ಗ್ರಂಥಾಲಯ ಇಲಾಖೆ, ಬೆಂಗಳೂರು.
12. ಸಂಪಾದಕರು, ಕರ್ನಾಟಕ ವಿಕಾಸ, ಗ್ರಾಮೀಣಾಭಿವೃದ್ಧಿ ಮತ್ತು ಪಂ.ರಾಜ್ ಇಲಾಖೆ.
13. ಮಾಹಿತಿ ಕೇಂದ್ರ/ ವೆಬ್‌ಸೈಟ್, ಗ್ರಾಅಪ ಇಲಾಖೆ.

**ಪ್ರತಿ ಮಾಹಿತಿಗಾಗಿ:**

1. ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂ.ರಾಜ್ ಸಚಿವರ ಆಪ್ತ ಕಾರ್ಯದರ್ಶಿ, ವಿಧಾನಸೌಧ.
2. ಸರ್ಕಾರದ ಪ್ರಧಾನ ಕಾರ್ಯದರ್ಶಿಗಳು (ಪಂ.ರಾಜ್), ಗ್ರಾಮೀಣಾಭಿವೃದ್ಧಿ ಮತ್ತು ಪಂ.ರಾಜ್ ಇಲಾಖೆ ಇವರ ಆಪ್ತ ಕಾರ್ಯದರ್ಶಿ.
3. ಸರ್ಕಾರದ ಅಧೀನ ಕಾರ್ಯದರ್ಶಿ, ವೆಚ್ಚ-6, ಆರ್ಥಿಕ ಇಲಾಖೆ, ವಿಧಾನಸೌಧ.
4. ಆಂತರಿಕ ಆರ್ಥಿಕ ಸಲಹೆಗಾರರು, ಗ್ರಾಮೀಣಾಭಿವೃದ್ಧಿ ಮತ್ತು ಪಂ.ರಾಜ್ ಇಲಾಖೆ.
5. ಹೆಚ್ಚುವರಿ ಪ್ರತಿ/ ಶಾಖಾ ರಕ್ಷಾ ಕಡತಕ್ಕೆ.